ಮಾಗಡಿಯ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಮಹಿಳಾ ವೈದ್ಯ ಇಲ್ಲದಿರುವುದು.

325 (698) ಶ್ರೀ ಹೆಚ್.ಸಿ.ಬಾಲಕೃಷ್ಣ (ಮಾಗಡಿ):

ಮಾನ್ಯ ಆರೋಗ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ತಾಲ್ಲೂಕು ಕುದೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಮಹಿಳಾ ವೈದ್ಯರಿಲ್ಲದೆ ಸಾರ್ವಜನಿಕರಿಗೆ ತೊಂದರೆ ಆಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? ಮಹಿಳಾ ವೈದ್ಯರ ಹುದ್ದೆಯನ್ನು ಈ ಆರೋಗ್ಯ ಕೇಂದ್ರದಲ್ಲಿ ಸೃಷ್ಟಿಸಲಾಗಿದೆಯೇ? ಸೃಷ್ಟಿಸದಿದ್ದರೆ ಯಾವಾಗ ಸೃಷ್ಟಿಸಲಾಗುವುದು;

ಆ) ಶೀಘ್ರವಾಗಿ ಮಹಿಳಾ ವೈದ್ಯರನ್ನು ಒದಗಿಸಲು ಸರ್ಕಾರದವರು ಕ್ರಮ ಕೈಗೊಳ್ಳುವರೇ?

ಡಾ॥ಹೆಚ್.ಸಿ.ಮಹದೇವಪ್ಪ (ಆರೋಗ್ಯ ಮತ್ತು ಕು.ಕ. ಸಚಿವರು)

ಅ) ಮಾಗಡಿ ತಾಲ್ಲೂಕಿನ ಕುದೂರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಮಹಿಳಾ ವೈದ್ಯರ ಹುದ್ದೆ ಮಂಡೂರಾಗಿರುವುದಿಲ್ಲ. ಈ ಕೇಂದ್ರಕ್ಕೆ 10 ಹಾಸಿಗೆಗಳ ಹೆರಿಗೆ ಆಸ್ಪತ್ರೆ ಮಂಜೂರು ಮಾಡಿದ್ದು, ಹೆಚ್ಚುವರಿ ಸಿಬ್ಬಂದಿಯನ್ನು ಮಂಜೂರು ಮಾಡುವಾಗ ಮಹಿಳಾ ವೈದ್ಯರ ಹುದ್ದೆಯನ್ನು ಸೃಷ್ಟಿಸುವ ವಿಷಯವನ್ನು ಪರಿಗಣಿಸಲಾಗುವುದು.

ಆ) ಮಾಗಡಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಮಹಿಳಾ ವೈದ್ಯರ ಸೇವೆಯನ್ನು ಕುದೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವಿನಿಯೋಗಿಸಲಾಗುತ್ತಿ

ಮಾಗಡಿ ತಾಲ್ಲೂಕಿನಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳು.

326 (698(ಎ)) ಶ್ರೀ ಹೆಚ್.ಸಿ.ಬಾಲಕೃಷ್ಣ (ಮಾಗಡಿ):

ಮಾನ್ಯ ಆರೋಗ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಾಗಡಿ ತಾಲ್ಲೂಕಿನಲ್ಲಿ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ? ಯಾವುವು;

ಆ) ಈ ಕೇಂದ್ರಗಳಲ್ಲಿ ಎಷ್ಟು ವೈದ್ಯರ ಹುದ್ದೆಗಳಿವೆ? ಖಾಲಿ ಇರುವ ವೈದ್ಯರ ಸಂಖ್ಯೆ ಎಷ್ಟು;

ಇ) ಈ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು?

ಡಾ॥ ಹೆಚ್.ಸಿ. ಮಹದೇವಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು)

ಅ) 11 ಪ್ರಾಥಮಿಕ ಆರೋಗ್ಯ ಕೇಂದ್ರಗಳಿವೆ.

(1) ಮಾಗಡಿ
(2) ವೀರೇಗೌಡನದೊಡ್ಡಿ
(3) ಸಂಕೀಘಟ್ಟ
(4) ಕುದೂರು
(5) ಬಾಣಾವಾಡಿ
(6) ಚಕ್ರಭಾವಿ